KARNATAKA STATE POLICE

ಕರ್ನಾಟಕ ಸರ್ಕಾರ

ಪೊಲೀಸ್ ಇಲಾಖೆ

ಸಂಖ್ಯೆ:87/ನೇಮಕಾತಿ-2/2019-20

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ರವರ ಕಛೇರಿ
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು, ದಿನಾಂಕ: 05.01.2021.

ವಿಷಯ: ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿ ಕುರಿತು.

ಉಲ್ಲೇಖ: 1] ಅಧಿಸೂಚನೆ ಸಂಖ್ಯೆ:87/ನೇಮಕಾತಿ-2/2019-20, ದಿನಾಂಕ:24.10.2019.
2] ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ದಿ:13.10.2020.
3] ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ದಿ:01.01.2021.

## ತಾತ್ಕಾಲಿಕ ಆಯ್ಕೆ ಪಟ್ಟಿ

1. ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿಯನ್ನು ಉಲ್ಲೇಖಿತ-1ರ ಅಧಿಸೂಚನೆಯನ್ವಯ ಕೈಗೊಳ್ಳಲಾಗಿರುತ್ತದೆ. ಸದರಿ ಹುದ್ದೆಗಳ ನೇಮಕಾತಿ ಸಲುವಾಗಿ ಅರ್ಜಿ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ನಡೆಸಿದ ನಂತರ ಸದರಿ ಪರೀಕ್ಷೆಗಳಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ದಿನಾಂಕ: 08.03.2020 ರಂದು ನಡೆಸಿ, ಪೂರ್ಣಗೊಳಿಸಲಾಗಿರುತ್ತದೆ.

2. ವೃಂದ ಮತ್ತು ನೇಮಕಾತಿ (ತಿದ್ದುಪಡಿ) ನಿಯಮಗಳು, 2009 ಮತ್ತು 2016 ರಲ್ಲಿನ ನಿಯಮಗಳನ್ವಯ ಮೇಲ್ಕಂಡ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ನೇಮಕಾತಿ ಅಧಿಸೂಚನೆಯಲ್ಲಿ ಪ್ರಕಟಿಸಲಾಗಿರುವ ಹುದ್ದೆಗಳಂತೆ ಮೆರಿಟ್ ಹಾಗೂ ಮೀಸಲಾತಿಯನುಸಾರ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿ, ಪ್ರಕಟಿಸಿದ ನಂತರ ಸದರಿ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳನ್ನು ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಹುದ್ದೆಗಳಂತೆ ತಮ್ಮ ಘಟಕಕ್ಕೆ ಸಂಬಂಧಿಸಿದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಉಲ್ಲೇಖಿತ-2ರನ್ವಯ ಪ್ರಕಟಿಸಲಾಗಿರುತ್ತದೆ.

3. ತಮ್ಮ ಘಟಕಕ್ಕೆ ಆಯ್ಕೆಯಾಗಿದ್ದ ಅಭ್ಯರ್ಥಿಗಳಲ್ಲಿ ಶ್ರೀ ಕೆ.ಎಸ್.ಸತೀಶ, ರವರು ತಮ್ಮ ಆಯ್ಕೆಯನ್ನು ರದ್ದುಗೊಳಿಸುವಂತೆ ಕೋರಿರುತ್ತಾರೆ ಮತ್ತು ಶ್ರೀ ಅಕ್ಷಯ್ ಎಂ ತೋಟಗೇರ್, ರವರು ವೈದ್ಯಕೀಯ ಪರೀಕ್ಷೆಯಲ್ಲಿ ಅನರ್ಹರಾಗಿರುತ್ತಾರೆ. ಆದ್ದರಿಂದ ಸದರಿ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಗೊಳಿಸಿ, ಸದರಿಯವರ ಸ್ಥಾನಗಳಿಗೆ ಮೆರಿಟ್ ಮತ್ತು ಮೀಸಲಾತಿಯನುಸಾರ ಅರ್ಹರಿರುವ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿ, ಕೆಳಕಂಡ ಷರತ್ತುಗಳನ್ವಯ ಪ್ರಕಟಿಸಲಾಗಿರುತ್ತದೆ.

ಎ) ಈ ಆಯ್ಕೆ ಪಟ್ಟಿಯು ನಿಯಮಗಳನುಸಾರ ರಚಿಸಲಾಗಿರುವ ವೈದ್ಯಕೀಯ ಮಂಡಳಿಯು ನಡೆಸುವ ವೈದ್ಯಕೀಯ ಪರೀಕ್ಷೆಯ ಫಲಿತಾಂಶಗಳಿಗೆ ಒಳಪಟ್ಟಿರುತ್ತದೆ.

ಬಿ) ಆಯ್ಕೆ ಪಟ್ಟಿಯಲ್ಲಿ ಅಭ್ಯರ್ಥಿಯ ಹೆಸರು ಇದ್ದ ಕಾರಣದಿಂದ ಸದರಿಯವರಿಗೆ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ, ಯಾವುದೇ ರೀತಿಯ ಕಾನೂನಾತ್ಮಕ ಹಕ್ಕು ಇರುವುದಿಲ್ಲ. ಸದರಿ ನೇಮಕಾತಿಯು ಮೇಲ್ಕಂಡಂತೆ ಹೇಳಲಾದ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಸಿ) ಈ ಆಯ್ಕೆ ಪಟ್ಟಿಯು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ / ಮಾನ್ಯ ಉಚ್ಚ ನ್ಯಾಯಾಲಯ / ಮಾನ್ಯ ಭಾರತದ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಮಾನಗಳಿಗೆ ಒಳಪಟ್ಟಿರುತ್ತದೆ.

| PROVISIONAL SELECT LIST FOR THE POST OF SUB-INSPECTOR OF POLICE (CIVIL) (MEN) (MERITWISE) | | | | | | | |
|---|---|---|---|---|---|---|---|
| SL. NO. | APPN. NO. | ROLL NO. | NAME | MARKS SECURED | | TOTAL | SELECTED CATEGORY |
| | | | | P1 | P2 | | |
| 1 | 6007344 | 8309078 | SHIVARAJ VENKATESH BETAGERI | 36 | 113.625 | 149.625 | GM_RUR |
| 2 | 6038933 | 8343942 | DHANANJAYA D H | 35 | 102 | 137 | SC_OTH |

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಮತ್ತು ಅಧ್ಯಕ್ಷರು,
ಪಿಎಸ್ಐ (ಸಿವಿಲ್) ನೇಮಕಾತಿ ಸಮಿತಿ,
ಕಾರ್ಲ್‌ಟನ್ ಭವನ, ಅರಮನೆ ರಸ್ತೆ,
ಬೆಂಗಳೂರು.

ಪ್ರತಿಯನ್ನು:
1] ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪಶ್ಚಿಮ ವಲಯ, ಮಂಗಳೂರು.
2] ಕಛೇರಿ ಕಡತ ಮತ್ತು ಸೂಚನಾ ಫಲಕ.

ಪ್ರತಿಯನ್ನು ಅಭಿನಂದನೆಗಳೊಂದಿಗೆ:
ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕರ್ನಾಟಕ ರಾಜ್ಯ, ಬೆಂಗಳೂರು.